**All India Radio: Bangalore**
**Regional Bulletin In Kannada**
**31.07.2025 / 2.30 p.m.**
**ಆಕಾಶವಾಣಿ ಬೆಂಗಳೂರು**

**31.07.2025 / 2.30 p.m.**
**<><><><>**

ಮುಖ್ಯಾಂಶಗಳು

1. ೨೦೩೫ರ ವೇಳೆಗೆ ಏಷ್ಯಾದ ಕ್ವಾಂಟಮ್ ರಾಜಧಾನಿಯಾಗಿ ಕರ್ನಾಟಕ - ಮುಖ್ಯಮಂತ್ರಿ ಸಿದ್ದರಾಮಯ್ಯ ಘೋಷಣೆ
2. ಧರ್ಮಸ್ಥಳ ಪ್ರಕರಣ ; ೬ನೇ ಸಮಾಧಿ ಸ್ಥಳದಲ್ಲಿ ೨ ಮೂಳೆಗಳನ್ನು ಪತ್ತೆ ಹಚ್ಚಿದ ಎಸ್ಐಟಿ ತಂಡ
3. ಮೈಸೂರಿನ ರಾಯನಕೆರೆ ತ್ಯಾಜ್ಯ ಸಂಸ್ಕರಣಾ ಘಟಕದಲ್ಲಿ ಪರೀಶಿಲನೆ ನಡೆಸಿದ ಉಪಲೋಕಾಯುಕ್ತ
4. ಪ್ರಸಕ್ತ ಸಾಲಿನ ಮುಂಗಾರು ಹಂಗಾಮಿಗೆ ಹವಾಮಾನ ಆಧಾರಿತ ಬೆಳೆ ವಿಮೆ ಯೋಜನೆಗೆ ಅಧಿಸೂಚನೆ ಪ್ರಕಟ

<><><><>

೨೦೩೫ರ ವೇಳೆಗೆ ೧೦ ಸಾವಿರ ಉನ್ನತ ಕೌಶಲ್ಯದ ಉದ್ಯೋಗಸೃಷ್ಟಿ ಹಾಗೂ ಕರ್ನಾಟಕವನ್ನು ಏಷ್ಯಾದ ಕ್ವಾಂಟಮ್ ರಾಜಧಾನಿಯಾಗಿ ಮಾಡುವುದು ರಾಜ್ಯ ಸರ್ಕಾರದ ಗುರಿಯಾಗಿದೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಘೋಷಿಸಿದ್ದಾರೆ. ಬೆಂಗಳೂರಿನಲ್ಲಿ ಇಂದು ದೇಶದಲ್ಲಿಯೇ ಮೊಟ್ಟಮೊದಲ ಕ್ವಾಂಟಮ್, ಕಂಪ್ಯೂಟಿಂಗ್ ಸಮ್ಮೇಳನಕ್ಕೆ ಚಾಲನೆ ನೀಡಿದ ಅವರು, ರಾಜ್ಯವು ಭಾರತದ ತಂತ್ರಜ್ಞಾನ ಮತ್ತು ನಾವೀನ್ಯತೆಯ ರಾಜಧಾನಿಯಾಗಿದ್ದು, ಮಾಹಿತಿ ತಂತ್ರಜ್ಞಾನ, ಜೈವಿಕ ತಂತ್ರಜ್ಞಾನ ಮತ್ತು ಸಂಶೋಧನೆಯಲ್ಲಿ ಸಾಮರ್ಥ್ಯ ಹೊಂದಿದೆ ಎಂದು ಹೇಳಿದ್ದಾರೆ. ವಿಶ್ವವೇ ೨೦೨೫ನ್ನು ಅಂತಾರಾಷ್ಟ್ರೀಯ ಕ್ವಾಂಟಮ್ ವರ್ಷವೆಂದು ಆಚರಿಸುತ್ತಿರುವಾಗ ಕರ್ನಾಟಕದ ಕ್ವಾಂಟಮ್ ಮಿಷನ್ ೨೦೩೫ ಘೋಷಿಸಲು ಹೆಮ್ಮೆ ಪಡುವುದಾಗಿ ತಿಳಿಸಿದ್ದಾರೆ.
೨೦ ಬಿಲಿಯನ್ ಡಾಲರ್ ಕ್ವಾಂಟಮ್ ಆರ್ಥಿಕತೆ ನಿರ್ಮಿಸುವುದು ಉದ್ಯೋಗ ಸೃಷ್ಟಿ ಕೈಗಾರಿಕೆಗಳು ಹಾಗೂ ಸಂಶೋಧನೆಯೇ ರಾಜ್ಯ ಸರ್ಕಾರದ ಗುರಿ ಎಂದು ತಿಳಿಸಿದ್ದಾರೆ.

<><><><>

ಧರ್ಮಸ್ಥಳ ಪ್ರಕರಣ ಕುರಿತಂತೆ ಎಸ್ಐಟಿ ಅಧಿಕಾರಿಗಳಿಂದ ಮೂರನೇ ದಿನವು ಮೃತದೇಹದ ಶೋಧ ಕಾರ್ಯ ಮುಂದುವರಿದಿದೆ. ಗುರುತಿಸಲಾದ ೧೩ ಸಮಾಧಿ ಸ್ಥಳಗಳಲ್ಲಿ ಪ್ರಸ್ತುತ ೬, ೭ ಮತ್ತು ೮ ಸಂಖ್ಯೆಯ ಸ್ಥಳಗಳಲ್ಲಿ ಶೋಧ ಕಾರ್ಯ ನಡೆಯುತ್ತಿದೆ. ೬ನೇ ಸಮಾಧಿ ಸ್ಥಳದಲ್ಲಿ ಎಸ್ಐಟಿ ಎರಡು ಮೂಳೆಗಳನ್ನು ಪತ್ತೆ ಹಚ್ಚಿದೆ ಎಂದು ಐಎಎನ್ಎಸ್ ಸುದ್ದಿ ಸಂಸ್ಥೆ ವರದಿ ಮಾಡಿದೆ. ತಹಸೀಲ್ದಾರ್ ವಿಧಿವಿಜ್ಞಾನ ತಜ್ಞರು ಮತ್ತು ದೂರುದಾರರು ಸ್ಥಳದಲ್ಲಿಯೇ ಮೊಕ್ಕಾಂ ಹೂಡಿದ್ದಾರೆ. ಮೊದಲ ಸಮಾಧಿ ಸ್ಥಳದಿಂದ ಲಕ್ಷ್ಮೀ ಎಂಬ ಮಹಿಳೆಗೆ ಸೇರಿದ್ದ ರವಿಕೆ ಹಾಗೂ ಪ್ಯಾನ್ ಕಾರ್ಡ್ ಅನ್ನು ತನಿಖಾಧಿಕಾರಿಗಳು ವಶಪಡಿಸಿಕೊಂಡಿದ್ದಾರೆ. ಈ ನಡುವೆ ೧೯೯೫ರಿಂದ ಧರ್ಮಸ್ಥಳ ಪೊಲೀಸ್ ಠಾಣೆಯಲ್ಲಿ ಸೇವೆ ಸಲ್ಲಿಸಿದ್ದ ಪೊಲೀಸ್ ಅಧಿಕಾರಿಗಳ ಪಟ್ಟಿಯನ್ನು ವಿಶೇಷ ತನಿಖಾ ತಂಡ ಪಡೆದಿದೆ. ರಾಜ್ಯಾದ್ಯಂತ ಕಾಣೆಯಾದ ಮಹಿಳೆಯರು, ಯುವತಿಯರ ಬಗ್ಗೆಯೂ ತಂಡ ಮಾಹಿತಿ ಸಂಗ್ರಹಿಸುತ್ತಿದೆ.

<><><><>

ಎಸ್‌ಐಟಿ ಮುಖ್ಯಸ್ಥ ಪ್ರಣವ್ ಮೊಹಾಂತಿ ಅವರನ್ನು ಕೇಂದ್ರ ಸೇವೆಗೆ ಕಳುಹಿಸುವ ಬಗ್ಗೆ ರಾಜ್ಯ ಸರ್ಕಾರ ತೀರ್ಮಾನ ತೆಗೆದುಕೊಂಡಿಲ್ಲ ಎಂದು ಗೃಹ ಸಚಿವ ಡಾ. ಜಿ. ಪರಮೇಶ್ವರ್ ಸ್ಪಷ್ಟಪಡಿಸಿದ್ದಾರೆ. ಬೆಂಗಳೂರಿನಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಈ ಪ್ರಕರಣದಲ್ಲಿ ಸತ್ಯಾಂಶ ಹೊರಬರಬೇಕೆನ್ನುವುದೇ ಸರ್ಕಾರದ ಉದ್ದೇಶ ಎಂದು ತಿಳಿಸಿದ್ದಾರೆ. ಪಾರದರ್ಶಕ ತನಿಖೆ ಮಾಡುವುದೇ ಸರ್ಕಾರದ ಗುರಿ ಎಂದು ಹೇಳಿದ್ದಾರೆ. ಇದೇ ವೇಳೆ ಬೆಂಗಳೂರು ನಗರದಲ್ಲಿ ರಸ್ತೆಯಲ್ಲಿ ವಾಹನಗಳನ್ನು ನಿಲ್ಲಿಸುವುದರಿಂದ ಟ್ರಾಫಿಕ್‌ಗೆ ಸಮಸ್ಯೆಯಾಗುತ್ತಿದ್ದು, ಮತ್ತೆ ಟೋಯಿಂಗ್ ಆರಂಭಿಸಲಾಗುವುದು ಎಂದು ತಿಳಿಸಿದ್ದಾರೆ.

<><><>

ಆಗಸ್ಟ್ ೫ ರಂದು ಕಾಂಗ್ರೆಸ್ ಮುಖಂಡ ರಾಹುಲ್ ಗಾಂಧಿ, ರಾಜ್ಯಕ್ಕೆ ಆಗಮಿಸುತ್ತಿರುವ ಹಿನ್ನೆಲೆಯಲ್ಲಿ ಎಐಸಿಸಿ ಪ್ರಧಾನ ಕಾರ್ಯದರ್ಶಿಗಳು ಪಕ್ಷದ ಮುಖಂಡರ ಸಭೆ ನಡೆಸಲಿದ್ದಾರೆ. ಸಭೆ ಬಳಿಕ ಕಾರ್ಯಕ್ರಮದ ಸ್ವರೂಪ ಹಾಗೂ ಸ್ಥಳದ ಬಗ್ಗೆ ತೀರ್ಮಾನ ತೆಗೆದುಕೊಳ್ಳಲಾಗುವುದು ಎಂದು ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ತಿಳಿಸಿದ್ದಾರೆ. ಇದೇ ವೇಳೆ ಬಿಜೆಪಿ ಆರೋಪದ ಕುರಿತಂತೆ ಪ್ರತಿಕ್ರಿಯಿಸಿದ ಅವರು, ಪ್ರಜಾಪ್ರಭುತ್ವ ವ್ಯವಸ್ಥೆಯಲ್ಲಿ ಅವರಿಗೂ ಹೋರಾಟ ಮಾಡುವ ಅಧಿಕಾರವಿದೆ ಎಂದು ಹೇಳಿದ್ದಾರೆ.

<><><>

ಮೈಸೂರಿನ ರಾಯನಕೆರೆ ನೀರು ಸಂಸ್ಕರಣಾ ಘಟಕ ಹಾಗೂ ಘನ ತ್ಯಾಜ್ಯ ಸಂಸ್ಕರಣಾ ಘಟಕಕ್ಕೆ ಇಂದು ಉಪಲೋಕಾಯುಕ್ತ ನ್ಯಾಯಮೂರ್ತಿ ಕೆ.ಎನ್. ಫಣೀಂದ್ರ ಭೇಟಿ ನೀಡಿ ಪರಿಶೀಲನೆ ನಡೆಸಿದರು. ರಾಯನಕೆರೆ ನೀರು ಸಂಸ್ಕರಣಾ ಘಟಕದ ಉತ್ತಮ ನಿರ್ವಹಣೆಯ ಬಗ್ಗೆ ಪ್ರಶಂಶೆ ವ್ಯಕ್ತಪಡಿಸಿದ ಅವರು ಮಲಿನ ನೀರೇತ್ತುವ ಯಂತ್ರಗಾರಕ್ಕೆ ಭೇಟಿ ನೀಡಿ ಅಧಿಕಾರಿಗಳಿಂದ ಮಾಹಿತಿ ಪಡೆದರು. ಘನ ತ್ಯಾಜ್ಯ ನಿರ್ವಹಣಾ ಘಟಕಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸಿದ ಅವರು, ಮೈಸೂರು ಮಾದರಿಯಲ್ಲಿಯೇ ಬೆಂಗಳೂರು ಹಾಗೂ ಇತರೆ ಜಿಲ್ಲೆಗಳಿಗೂ ಘನತ್ಯಾಜ್ಯ ನಿರ್ವಹಣಾ ಘಟಕ ನಿರ್ಮಾಣ ಮಾಡಿ ಅಳವಡಿಸಲು ಸರ್ಕಾರಕ್ಕೆ ಪ್ರಸ್ತಾವನೆ ಸಲ್ಲಿಸಲಾಗುವುದು ಎಂದು ತಿಳಿಸಿದರು. ಘನ ತ್ಯಾಜ್ಯ ನಿರ್ವಹಣಾ ಘಟಕದಲ್ಲಿ ಕೆಲಸ ಮಾಡುವವರಿಗೆ ಪ್ರತಿ ತಿಂಗಳು ಆರೋಗ್ಯ ತಪಾಸಣೆ, ಉತ್ತಮವಾದ ಗ್ಲೌಸ್, ಬೂಟ್ ಹಾಗೂ ಮಾಸ್ಕ್ ನೀಡುವಂತೆ ಅಧಿಕಾರಿಗಳಿಗೆ ಸೂಚಿಸಿದರು.

<><><>

ಸಾರ್ವಜನಿಕ ಅಭಿಪ್ರಾಯ ರೂಪಿಸುವ ಶಕ್ತಿ ಮಾಧ್ಯಮಗಳಿಗಿದ್ದು, ಇದನ್ನು ಸದುಪಯೋಗಪಡಿಸಿಕೊಳ್ಳಬೇಕು ಎಂದು ಅರಣ್ಯ, ಪರಿಸರ ಸಚಿವ ಈಶ್ವರ್ ಖಂಡ್ರೆ ತಿಳಿಸಿದ್ದಾರೆ. ಬೆಂಗಳೂರಿನಲ್ಲಿಂದು ಕರ್ನಾಟಕ ಮಾಧ್ಯಮ ಪತ್ರಕರ್ತರ ಸಂಘದ ರಾಜ್ಯಮಟ್ಟದ ಉದ್ಘಾಟನೆ ನೆರವೇರಿಸಿ ಮಾತನಾಡಿದ ಅವರು, ಕೋಮುಘರ್ಷಣೆ, ಜಾತಿ, ಜನಾಂಗೀಯ ಸಂಘರ್ಷ ಮೊದಲಾದ ಸೂಕ್ಷ್ಮ ವಿಚಾರಗಳ ವರದಿಗಾರಿಕೆಯಲ್ಲಿ ಮಾಧ್ಯಮಗಳು ಸೂಕ್ಷ್ಮ ಸಂವೇದನೆ ಹೊಂದಿರಬೇಕು ಎಂದು ಹೇಳಿದ್ದಾರೆ. ಪ್ರಚೋದನಕಾರಿಯಾದ ವರದಿಗೆ ಕಡಿವಾಣ ಹಾಕಬೇಕು ಎಂದು ಅಭಿಪ್ರಾಯಪಟ್ಟಿದ್ದಾರೆ. ಇದೇ ವೇಳೆ ಗಣೇಶನ ಹಬ್ಬಕ್ಕೆ ನೀರಲ್ಲಿ ಕರಗದ ಪಿಒಪಿ ಗಣಪತಿ ಮೂರ್ತಿಗಳನ್ನು ನೀರಲ್ಲಿ ವಿಸರ್ಜನೆ ಮಾಡುವುದು ಏಕ ಬಳಕೆ ಪ್ಲಾಸ್ಟಿಕ್ ಉತ್ಪನ್ನಗಳನ್ನು ನಿಷೇಧಿಸಲಾಗಿದೆ. ಈ ಕುರಿತಂತೆ ಮಾಧ್ಯಮಗಳು ಜಾಗೃತಿ ಮೂಡಿಸಬೇಕು ಎಂದು ಕರೆ ನೀಡಿದ್ದಾರೆ.

<><><>

ವಿಜಯಪುರದಲ್ಲಿ ಪ್ರಸಕ್ತ ಸಾಲಿನ ಮುಂಗಾರು ಹಂಗಾಮಿನಲ್ಲಿ ದ್ರಾಕ್ಷಿ ಬೆಳೆಗೆ ಮರುವಿನ್ಯಾಸಗೊಳಿಸಲಾದ ಹವಾಮಾನ ಆಧಾರಿತ ಬೆಳೆ ವಿಮಾ ಯೋಜನೆಯನ್ನು ಅನುಷ್ಠಾನಗೊಳಿಸಲು ಅಧಿಸೂಚನೆ ಹೊರಡಿಸಲಾಗಿದೆ. ಬೆಳೆ ಸಾಲ ಪಡೆದ ರೈತರು ಹಾಗೂ ಬೆಳೆ ಸಾಲ ಪಡೆಯದೆ ಇರುವ ರೈತರು ತಮ್ಮ ಆಧಾರ್‌ಕಾರ್ಡ್ ಪ್ರತಿ ಹಾಗೂ ಬ್ಯಾಂಕ್ ಪಾಸ್‌ಬುಕ್ ಪ್ರತಿಯೊಂದಿಗೆ ಸಮೀಪದ ಬ್ಯಾಂಕ್‌ಗಳಲ್ಲಿ ಹಾಗೂ ಗ್ರಾಮ ಒನ್ ಕೇಂದ್ರ ಅಥವಾ ಸಿಎಸ್‌ಸಿ ಸೆಂಟರ್‌ಗಳಲ್ಲಿ ವಿಮಾ ಯೋಜನೆಯಡಿ ನೊಂದಾಯಿಸಿಕೊಳ್ಳಬಹುದು. ಮುಂಗಾರು ಹಂಗಾಮಿನಲ್ಲಿ ದ್ರಾಕ್ಷಿ ಬೆಳೆಯ ವಿಮಾ ನೋಂದಣಿಗೆ ಆಗಸ್ಟ್ ೧೬ ಕೊನೆಯ ದಿನವಾಗಿದೆ. ರೈತರು ಪಾವತಿಸಬೇಕಾದ ವಿಮಾ ಮೊತ್ತ  ಪ್ರತಿ ಹೆಕ್ಟರ್‌ಗೆ ೧೪ ಸಾವಿರ ರೂಪಾಯಿಗಳಾಗಿದೆ ಎಂದು ತೋಟಗಾರಿಕಾ ಇಲಾಖೆಯ ಉಪ ನಿರ್ದೇಶಕರ ಪ್ರಕಟಣೆ ತಿಳಿಸಿದೆ.

<><><>

೨೦೨೫ರ ಮುಂಗಾರು ಋತುವಿನ ಮರುವಿನ್ಯಾಸಗೊಳಿಸಿದ ಹವಾಮಾನ ಆಧಾರಿತ ಬೆಳೆ ವಿಮೆ ಯೋಜನೆಯಡಿ ತಾಲ್ಲೂಕಿನ ರೈತರು ನೋಂದಾಯಿಸಿಕೊಳ್ಳಲು ಆಗಸ್ಟ್ ೧೧ ಅಂತಿಮ ದಿನವಾಗಿದೆ. ಅಡಿಕೆ ಬೆಳೆಗೆ ಪ್ರತಿ ಎಕರೆಗೆ ೫೧ ಸಾವಿರದ ೨೦೦ ರೂಪಾಯಿ, ವಿಮಾ ಮೊತ್ತ ಇದ್ದು, ರೈತರು ೨ ಸಾವಿರದ ೫೯೧ ರೂಪಾಯಿ ಕಂತನ್ನು ಪಾವತಿಸಬೇಕು. ಕಾಳುಮೆಣಸು ಪ್ರತಿ ಎಕರೆಗೆ ೧೮ ಸಾವಿರದ ೮೦೦ ರೂಪಾಯಿ ವಿಮಾ ಮೊತ್ತ ಇದ್ದು, ರೈತರು ೯೫೨ ರೂಪಾಯಿ ಕಂತನ್ನು ಪಾವತಿಸಬೇಕು. ಬೆಳೆ ಸಾಲ ಪಡೆಯುವ ರೈತರು ಅಂತಿಮ ದಿನಾಂಕದ ಒಂದು ವಾರದ ಒಳಗಾಗಿ ಸಂಬಂಧಿತ ಬ್ಯಾಂಕ್ ವ್ಯವಸ್ಥಾಪಕರ ಮೂಲಕ ಈ ಯೋಜನೆಯಿಂದ ಹೊರಗುಳಿಯಲು ಲಿಖಿತವಾಗಿ ತಿಳಿಸಬಹುದಾಗಿದೆ ಎಂದು ಉತ್ತರಕನ್ನಡ ತೋಟಗಾರಿಕಾ ಇಲಾಖೆಯ ಪ್ರಕಟಣೆ ತಿಳಿಸಿದೆ.

<><><>

ಮಂಡ್ಯ ಜಿಲ್ಲಾಧಿಕಾರಿ ಡಾ.ಕುಮಾರ ಇಂದು ಮಂಡ್ಯ ನಗರಸಭೆಗೆ ದಿಢೀರ್ ಭೇಟಿ ನೀಡಿ ಪರಿಶೀಲನೆ ನಡೆಸಿದರು. ನಗರಸಭೆ ಕಚೇರಿಯಲ್ಲಿ ಹಾಜರಿದ್ದ ಸಾರ್ವಜನಿಕರಿಂದ ದೂರುಗಳನ್ನು ಸ್ವೀಕರಿಸಿ, ನಿಗದಿತ ಸಮಯದಲ್ಲಿ ನಿಯಮಾನುಸಾರ ಪರಿಶೀಲನೆ ನಡೆಸಿ ವಿಲೇವಾರಿ ಮಾಡುವಂತೆ ಅಧಿಕಾರಿಗಳಿಗೆ ಸೂಚಿಸಿದರು. ನಗರಸಭೆಯ ಕಂದಾಯ ವಿಭಾಗಕ್ಕೆ ಭೇಟಿ ನೀಡಿ "ಎ" ಖಾತೆ ಮತ್ತು "ಬಿ" ಖಾತೆ ನೀಡುವ ಬಗ್ಗೆ ಪ್ರಗತಿ ಪರಿಶೀಲಿಸಿದರು. ಇಂದಿರಾ ಕ್ಯಾಂಟೀನ್ ನಲ್ಲಿ ಆಹಾರ ಗುಣಮಟ್ಟವನ್ನು ಕಾಪಾಡುವಂತೆಯೂ ಸೂಚನೆ ನೀಡಿದರು. ನ್ಯಾಯಾಲಯದಲ್ಲಿ ದಾಖಲಾಗಿರುವ ಪ್ರಕರಣಗಳನ್ನ ವಿಲೇಗೊಳಿಸುವ ಸಂಬಂಧ ಕ್ರಮವಹಿಸುವಂತೆ ಅಧಿಕಾರಿಗಳಿಗೆ ತಿಳಿಸಿದರು.

<><><>

ಜಲ ಜೀವನ್ ಮಿಷನ್ ಯೋಜನೆಯ ಅನುಷ್ಠಾನದ ಕುರಿತು ೧೫ ದಿನಗಳ "ಕ್ಷೇತ್ರ ಭೇಟಿ ಪರಿಶೀಲನಾ ಆಂದೋಲನ" ದ ಅಂಗವಾಗಿ ಕೊಡಗು ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಆನಂದ ಪ್ರಕಾಶ್ ಮೀನಾ  ಜಿಲ್ಲೆಯ ವಿವಿಧ ಗ್ರಾಮಗಳಿಗೆ ಭೇಟಿ ನೀಡಿದರು. ಕುಶಾಲನಗರ ತಾಲ್ಲೂಕಿನ ಸುಂಟಿಕೊಪ್ಪ, ಏಳನೇ ಹೊಸಕೋಟೆ, ನಂಜರಾಯಪಟ್ಟಣ ಗ್ರಾಮಗಳಿಗೆ ಭೇಟಿ ನೀಡಿ ಜೆಜೆಎಂ ಕಾಮಗಾರಿಯಡಿ ಅಳವಡಿಸಿರುವ ಗೃಹನಳ ಸಂಪರ್ಕದ ಗುಣಮಟ್ಟ, ಮೀಟರ್ ಅಳವಡಿಕೆ, ಕುಡಿಯುವ ನೀರಿನ ಪೂರೈಕೆ, ರಸ್ತೆ ಪುನಶ್ಚೇತನ ಹಾಗೂ ಗ್ರಾಮ ಪಂಚಾಯಿತಿಗಳಲ್ಲಿ - ನೀರಿನ ಗುಣಮಟ್ಟ ಸೇರಿದಂತೆ ವಿವಿಧ ವಿಷಯಗಳ ಕುರಿತು ವರದಿಗಳನ್ನು

ಪರಿಶೀಲಿಸಿದರು. ಗ್ರಾಮಗಳಲ್ಲಿನ ಶಾಲೆ, ಗ್ರಂಥಾಲಯ ಮತ್ತು ಅಂಗನವಾಡಿಗಳಿಗೆ ಭೇಟಿ ನೀಡಿದ ಅವರು ಗ್ರಾಮಗಳಲ್ಲಿರುವ ಕುಡಿಯುವ ನೀರಿನ ಯೋಜನೆಯ ನೀರು ಶುದ್ಧೀಕರಣ ಘಟಕಗಳು ಹಾಗೂ ನೀರು ಶೇಖರಣ ತೊಟ್ಟಿಗಳನ್ನು ಪರಿಶೀಲಿಸಿದರು.

<><><><>

ಗದಗ ಜಿಲ್ಲೆಯಲ್ಲಿ ಸ್ವಾತಂತ್ರ್ಯೋತ್ಸವ ದಿನಾಚರಣೆಯನ್ನು ಅರ್ಥಪೂರ್ಣವಾಗಿ ಆಚರಿಸಲು ವಿವಿಧ ಇಲಾಖೆಯ ಅಧಿಕಾರಿಗಳು ಕ್ರಮ ವಹಿಸಬೇಕೆಂದು ಜಿಲ್ಲಾಧಿಕಾರಿ ಸಿ.ಎನ್.ಶ್ರೀಧರ್ ಸೂಚಿಸಿದ್ದಾರೆ.

<><> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <><>